# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಏಕಾಂಗಿಯೆಂಬ ಆತಂಕ ಬೇಡ,
ಜನಿಸಿ ಮರಣಿಸುವುದು ಒಂಟಿಯಾಗಿಯೇ ತಾನೇ..
ಬಡವ ಶ್ರೀಮಂತನೆಂಬ ಅಳುಕು ಬೇಡ,
ಚಿತೆ ಸುಡುವಾಗ ಯಾವುದನ್ನು ನೋಡಲ್ಲ ತಾನೇ..
ದರ್ಪ ಅಹಂಕಾರ ತೋರಿಸಲೇ ಬೇಡ,
ಎಂದೆಂದಿಗೂ ಮಣ್ಣಾಗದೇ ಬಿಡೋದಿಲ್ಲ ತಾನೇ..
ಕೋಪ ಜಗಳ ಮಾಡಲೇ ಬೇಡ,
ಪೃಥ್ವಿಯಲಿ ಜೀವಿಸುವುದು ತಾಳ್ಮೆ ಇದ್ದರೆ ತಾನೇ.
ನಾನು ನನ್ನದು ಎಂಬುದನ್ನು ತೋರಿಸಲೇ ಬೇಡ,
ಎಲ್ಲವೂ ನಡೆಯುವುದು ಭಗವಂತನಿಂದಲೇ ತಾನೇ..

**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 16-05-2025 to 22-05-2025 ಬೆಲೆ: 7-00 ಸಂಪುಟ–4 ಸಂಚಿಕೆ–47 ಪುಟಗಳು–6









ಪಹಲ್ಗಾಮ್ ದಾಳಿಯ ಬೆನ್ನಲ್ಲೇ ಭಾರತೀಯ ಸೇನೆ "ಆಪರೇಷನ್ ಸಿಂದೂರ್" ಎನ್ನುವ ಹೆಣ್ಣಿನ ಹಣೆಯ ಕುಂಕುಮದ ಹೆಸರಿನೊಂದಿಗೆ ಕಾರ್ಯಾಚರಣೆ ನಡೆಸಿ, ನಮ್ಮ ಶತ್ರುರಾಷ್ಟ್ರಗಳಿಗೆ ಮಾತ್ರವಲ್ಲದೆ ನಮ್ಮ ಕೆಣಕಲು ಮುಂದಾಗಿದ್ದ ರಾಷ್ಟ್ರಗಳಿಗೂ ದಿಟ್ಟ ಉತ್ತರ ರವಾಣಿಸುವುದರ ಮೂಲಕ ನಮ್ಮ ದೇಶದ ವಿಷಯಕ್ಕೆ ಬಂದರೆ ಯಾವ ಕಾರ್ಯಕ್ಕೂ ನಾವು ಸಿದ್ದ ಎನ್ನುವುದನ್ನು ತೋರಿಸಿಕೊಟ್ಟು, ಭಾರತ ದೇಶದ ಪ್ರತಿಯೊಬ್ಬ ಪ್ರಜೆಯೂ ತಲೆ ಎತ್ತಿ ನಡೆಯುವಂತೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ನಮ್ಮ ಯೋಧರಿಗೆ ಕೃತಜ್ಞತೆಯ ಜೊತೆಗೆ ದೊಡ್ಡದೊಂದು ಸಲಾಂ ಅರ್ಪಿಸೋಣ.

## "ಆಪರೇಷನ್ ಸಿಂಧೂರ್" ಭಾರತೀಯತೆಯ ಪ್ರತೀಕ–ನಮೋ




**ನವದೆಹಲಿ:** ಆಪರೇಷನ್ ಸಿಂಧೂರ್ ಕುರಿತು ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ನಾನು ನಮ್ಮ ಭದ್ರತಾ ಪಡೆಗಳನ್ನು ಅಭಿನಂದಿಸಲು ಮತ್ತು ವಂದಿಸಲು ಬಯಸುತ್ತೇನೆ ಎಂದು ಹೇಳಿದ್ದಾರೆ. ಪಹಲ್ಗಾಮ್ ದಾಳಿಯು ಭಯೋತ್ಪಾದನೆಯ ಅತ್ಯಂತ ಅನಾಗರಿಕ ಮುಖವಾಗಿತ್ತು. ಅದು ನನಗೆ ವೈಯಕ್ತಿಕ ನೋವಾಗಿತ್ತು ಎಂದಿರುವ ಪ್ರಧಾನಿ, ಭಯೋತ್ಪಾದಕರನ್ನು ಧೂಳಿಪಟ ಮಾಡಲು ನಾವು ಸಶಸ್ತ್ರ ಪಡೆಗಳಿಗೆ ಸಂಪೂರ್ಣ ಸ್ವಾತಂತ್ರ್ಯವನ್ನು ನೀಡಿದ್ದೇವೆ ಎಂದು ಘೋಷಿಸಿದರು. ನಮ್ಮ **3ನೇ ಪುಟಕ್ಕೆ**

## 'ಪ್ರಜಾಸೌಧ' ಉದ್ಘಾಟನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ

ಮಂಗಳೂರು: ದ.ಕ. ಜಿಲ್ಲಾಡಳಿತ, ಕರ್ನಾಟಕ ಗೃಹ ಮಂಡಳಿ, ಸ್ಮಾರ್ಟ್ ಸಿಟಿ ಲಿಮಿಟೆಡ್ ಆಶ್ರಯದಲ್ಲಿ ಪಡೀಲ್‌ನಲ್ಲಿ ನಿರ್ಮಾಣಗೊಂಡಿರುವ ನೂತನ ಜಿಲ್ಲಾಧಿಕಾರಿ ಸಂಕೀರ್ಣ 'ಪ್ರಜಾಸೌಧ'ವನ್ನು ಮೇ 16ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಲಿದ್ದಾರೆ. ಮೂರು ಮಹಡಿಗಳ ಸಂಕೀರ್ಣವು ಒಟ್ಟು 253159.67 ಚದರ ಅಡಿ ವಿಸ್ತೀರ್ಣವನ್ನು ಹೊಂದಿದ್ದು, ಸಂಕೀರ್ಣ 75 ಕೋಟಿರೂ. ವೆಚ್ಚದಲ್ಲಿ ಪೂರ್ಣಗೊಂಡಿದೆ. ತಳ ಮಹಡಿಯಲ್ಲಿ ಮಂಗಳೂರು ಒನ್ ಕಚೇರಿ, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಅಂಚೆ ಕಚೇರಿ, ಪೊಲೀಸ್ ಚೌಕಿ, ಕ್ಯಾಂಟೀನ್, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ, ಬ್ಯಾಂಕ್, ಖಜಾನೆ ಮತ್ತು ಭದ್ರತಾ ಕೊಠಡಿ, ಜಿಲ್ಲಾ ಆರೋಗ್ಯ ಕೇಂದ್ರ, ದಾಸ್ತಾನು ಕೊಠಡಿಯನ್ನು ಹೊಂದಿರಲಿದೆ. ನೆಲ ಮಹಡಿಯಲ್ಲಿ ಮಾಹಿತಿ ಕೇಂದ್ರ, ಸಾರ್ವಜನಿಕ ಸಂಪರ್ಕ ಕೇಂದ್ರ, ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ., ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, **3ನೇ ಪುಟಕ್ಕೆ...**



## ಸುಹಾಸ್ ಹತ್ಯೆ ತನಿಖೆಯನ್ನು ಎನ್‌ಐಎಗೆ ವಹಿಸಿ:ಡಾ.ಭರತ್ ಶೆಟ್ಟಿ

ಮಂಗಳೂರು: ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆಯ ಸಂಚಿನಲ್ಲಿ ನಿಷೇಧಿತ ಉಗ್ರ ಚಟುವಟಿಕೆಯಲ್ಲಿದ್ದ ಕೆ.ಎಫ್‌ಡಿ.ಪಿ.ಎಫ್.ಐ ಕೈವಾಡ ಬಯಲಾಗಿದೆ. ಇನ್ನಷ್ಟು ಹಿಂದು ಕಾರ್ಯಕರ್ತರನ್ನು ಟಾರ್ಗೆಟ್ ಮಾಡುವ ಮುನ್ನ ಸುಹಾಸ್ ಶೆಟ್ಟಿ ಕೊಲೆಯ ಪ್ರಕರಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರೀಯ ತನಿಖಾ ಸಂಸ್ಥೆಗೆ ವಹಿಸಬೇಕು. ಈ ಮೂಲಕ ರಾಜ್ಯದಲ್ಲಿ ಮತ್ತಷ್ಟು ಹತ್ಯೆಗಳನ್ನು ತಡೆಯಬೇಕು ಎಂದು ಶಾಸಕರಾದ ಡಾ. ಭರತ್ ಶೆಟ್ಟಿ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದ್ದಾರೆ. ಇದೀಗ ಬಂಧಿತನಾಗಿರುವ ನೌಶಾದ್ **3ನೇ ಪುಟಕ್ಕೆ...**










ಕರಾವಳಿ ತರಂಗಿಣಿ

# ಕಲಾ ತರಂಗಿಣಿ





## 'ಕೆಂಪಾನ ಗಲ್ಲದ ಹುಡುಗಿ'ಯಲ್ಲಿ ಉತ್ತರ ಕರ್ನಾಟಕದ ಸೊಗಡು

ಈಗೀಗ ಉತ್ತರ ಕರ್ನಾಟಕ ಭಾಗದ ಅನೇಕ ನಿರ್ಮಾಪಕರು ಕನ್ನಡ ಚಿತ್ರರಂಗಕ್ಕೆ ಬರುತ್ತಿದ್ದಾರೆ. ಅದೇ ರೀತಿ ಬೆಳಗಾವಿ ಮೂಲದ ಬಸವರಾಜ ಬೆಣ್ಣೆ ಹಾಗೂ ರವಿ ಬೆಣ್ಣೆ ಸಹೋದರರೂ ತಮ್ಮ ಕೊಡುಗೆ ನೀಡಲು ಅಣಿಯಾಗಿದ್ದಾರೆ. ನಂದಿ ಸಿನಿಮಾಸ್ ಮೂಲಕ "ಸೂರ್ಯ" ಎಂಬ ಮಾಸ್ ಲವ್ ಸ್ಟೋರಿಯನ್ನು ನಿರ್ಮಿಸಿ, ತೆರೆಗೆ ತರುವ ಸಿದ್ದತೆ ನಡೆಸಿದ್ದಾರೆ. ಯುವಕನೊಬ್ಬ ತನ್ನ ಪ್ರೀತಿಯನ್ನು ಪಡೆದುಕೊಳ್ಳಲು ಏನೆಲ್ಲ ಹೋರಾಟ, ಸಾಹಸ ಮಾಡುತ್ತಾನೆ ಎಂಬುದನ್ನು ಈ ಚಿತ್ರದ ಮೂಲಕ ನಿರ್ದೇಶಕ ಯುವ ನಿರ್ದೇಶಕ ಸಾಗರ್ ದಾಸ್ ಹೇಳಹೊರಟಿದ್ದಾರೆ. ಯುವನಟ ಪ್ರಶಾಂತ್ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದು, ಹರ್ಷಿತಾ ನಾಯಕಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಈ ಚಿತ್ರದಲ್ಲಿ ಬರುವ ಉತ್ತರಕರ್ನಾಟಕ ಶೈಲಿಯ 'ಕೆಳಪಾನ ಗಲ್ಲದ ಹುಡುಗಿ' ಎಂಬ ಹಾಡಿನ ಬಿಡುಗಡೆ ಸಮಾರಂಭ ಸೋಮವಾರ ನಡೆಯಿತು. ಯಾವುದೇ ಸೆಲಬ್ರಟಿ ಕರೆಸದೆ, ಆ ಹಾಡು ಹುಟ್ಟಲು, ತೆರೆ ಮೇಲೆ ಅಷ್ಟು ಚೆನ್ನಾಗಿ ಮೂಡಿಬರಲು ಕಾರಣಕರ್ತರಾದ ಎಲ್ಲಾ ಸೃಷ್ಟಿಕರ್ತರುಗಳೂ ಸೇರಿ ಸಾಂಗ್‌ನ್ನು ವೇದಿಕೆಯಲ್ಲಿ ರಿಲೀಸ್ ಮಾಡಿದ್ದು ವಿಶೇಷವಾಗಿತ್ತು. ಸಾಹಿತಿ, ನಿರ್ದೇಶಕ ಸಾಗರ್, ಗಾಯಕರಾದ ರವೀಂದ್ರ ಸೊರಗಾವಿ, ಸ್ಫೂರ್ತಿ, ಸಂಗೀತ ನಿರ್ದೇಶಕ ಶ್ರೀಶ ಸಾಸ್ತಾ, ಕೊರಿಯಾಗ್ರಾಫರ್ ವಸಂತ್, ನಾಯಕ ಪ್ರಶಾಂತ್, ನಾಯಕಿ ಹರ್ಷಿತಾ ಜತೆ ನಿರ್ಮಾಪಕ ಸಹೋದರರು ಸೇರಿ ಈ ಹಾಡಿಗೆ ಚಾಲನೆ ನೀಡಿದರು. ಹಾಡಿನ ಪ್ರದರ್ಶನದ ನಂತರ. ಚಿತ್ರದ ಕುರಿತಂತೆ ಮಾತನಾಡಿದ ನಿರ್ಮಾಪಕ ಬಸವರಾಜ ಬೆಣ್ಣೆ ಈ ಸಿನಿಮಾಗೆ ನಾವೆಲ್ಲಾ ತುಂಬಾ ಕಷ್ಟಪಟ್ಟಿದ್ದೇವೆ. ಉದ್ಯಮಿಗಳಾಗಿ ಪೂನಾದಲ್ಲಿ ನೆಲೆಸಿದ್ದರೂ ಹುಟ್ಟಿ ಬೆಳೆದ ಕನ್ನಡನಾಡಿಗೆ ಏನಾದರೂ ಕೊಡುಗೆ ನೀಡಬೇಕೆಂದು, ಕನ್ನಡ ಪ್ರತಿಭೆಗಳನ್ನು ಬೆಳೆಸಬೇಕೆಂದು ಈ ಸಿನಿಮಾ ಮಾಡಿದ್ದೇವೆ ಎಂದು ಹೇಳಿದರು. ಬಿ.ಸುರೇಶ್ ಜೊತೆ ಸಹನಿರ್ದೇಶಕರಾಗಿ ಕೆಲಸ ಮಾಡಿದ್ದ ಸಾಗರ್‌ದಾಸ್ ವಿಭಿನ್ನವಾದ ಹೊಸಥರದ ಮಾಸ್ ಲವ್ ಸ್ಟೋರಿ ಇಟ್ಟುಕೊಂಡು ಸೂರ್ಯ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ಆಕ್ಷನ್‌ಕಟ್ ಹೇಳಿದ್ದಾರೆ. ಈಗಾಗಲೇ ಚಿತ್ರದ ಚಿತ್ರೀಕರಣ ಮುಗಿದು ಸಿಜಿವರ್ಕ್ ನಡೆಯುತ್ತಿದೆ. ಹಾಡು, ಚಿತ್ರದ ಕುರಿತು ಮಾತನಾಡಿದ ನಿರ್ದೇಶಕ ಸಾಗರ್, ಸೂರ್ಯ ಇದು ನಾಯಕನ ಹೆಸರು. ಆತ ತನ್ನ ಪ್ರೀತಿಗೋಸ್ಕರ ಯುದ್ದದ ರೀತಿಯಲ್ಲಿ ಸಮರ ಸಾರಿ ಅದನ್ನು ಹೇಗೆ ಉಳಿಸಿಕೊಳ್ಳುತ್ತಾನೆ ಎನ್ನುವುದೇ ಚಿತ್ರದ ಕಥಾಹಂದರ. ಬೆಂಗಳೂರು ಸುತ್ತಮುತ್ತ ಹಾಗೂ ಪೂನಾದಲ್ಲಿ ಚಿತ್ರದ ಚಿತ್ರೀಕರಣ ನಡೆಸಿದ್ದೇವೆ. ಜೂನ್, ಜುಲೈ ವೇಳೆಗೆ ಚಿತ್ರ ಬಿಡುಗಡೆಯಾಗಲಿದೆ.

## ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರಕ್ಕೆ ಅಜಯ್ ವರ್ಧನ್ ನಾಯಕ

ಕನ್ನಡ ಚಿತ್ರರಂಗದಲ್ಲಿ ನಿರ್ದೇಶಕಿಯರ ಸಂಖ್ಯೆ ಬಹಳ ಕಡಿಮೆ. ಈಗ ಆ ಸಾಲಿಗೆ ಸಾನ್ವಿಕ ಸೇರ್ಪಡೆಯಾಗಿದ್ದಾರೆ. ಕೇರಳ ರಾಜ್ಯದವರಾದ ಸಾನ್ವಿಕ ತಮ್ಮ ಮೊದಲ ನಿರ್ದೇಶನದ ಚಿತ್ರವನ್ನು ಕನ್ನಡದಲ್ಲಿ ಮಾಡಿರುವುದು ವಿಶೇಷ. ನಿರ್ದೇಶನ ಮಾತ್ರ ಅಲ್ಲ. ನಿರ್ಮಾಪಕಿ, ನಾಯಕಿ, ಸಾಹಸ ನಿರ್ದೇಶಕಿ ಹೀಗೆ ಒಂಭತ್ತು ಆಯಾಮಾಗಳಲ್ಲಿ ಸಾನ್ವಿಕ ಕೆಲಸ ಮಾಡಿದ್ದಾರೆ. ಅಜಯ್ ವರ್ಧನ್ ಈ ಚಿತ್ರದ ನಾಯಕರಾಗಿ ನಟಿಸಿದ್ದು, ಇತ್ತೀಚೆಗ ಈ ಚಿತ್ರದ ಟ್ರೇಲರ್ ಹಾಗೂ ಹಾಡುಗಳ ಬಿಡುಗಡೆ ನೆರವೇರಿತು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. "ಜಾವ ಕಾಫಿ" ಚಿತ್ರ ನನ್ನ ಕನಸು ಹಾಗೂ ನನ್ನ ಮನಸ್ಸು ಎಂದು ಮಾತನಾಡಿದ ನಿರ್ದೇಶಕಿ, ನಾಯಕಿ, ನಿರ್ಮಾಪಕಿ ಸಾನ್ವಿಕ, ಚಿತ್ರ ನಿರ್ದೇಶನ ಮಾಡಬೇಕೆಂಬುದು ನನ್ನ ಹದಿನೈದು ವರ್ಷಗಳ ಕನಸು. ಈಗ ಅದು ನನಸಾಗಿದೆ. ನಾನು ಕೇರಳದವಳಾಗಿದರೂ ನನ್ನ ಮೊದಲ ಚಿತ್ರವನ್ನು ಕನ್ನಡದಲ್ಲಿ ಮಾಡಿದ್ದೇನೆ. ನಿರ್ದೇಶಕಿ, ನಿರ್ಮಾಪಕಿ, ನಾಯಕಿ, ಕಥೆ, ಚಿತ್ರಕಥೆ, ಸಾಹಸ ನಿರ್ದೇಶನ ಸೇರಿದಂತೆ ಈ ಚಿತ್ರದ ಒಂಭತ್ತು ಆಯಾಮಗಳಲ್ಲಿ ಕೆಲಸ ಮಾಡಿದ್ದೇನೆ. ಕನ್ನಡದಲ್ಲಿ ನಿರ್ದೇಶನ ಮಾಡಲು ನನಗೆ ಅಸೋಸಿಯೇಟ್ ಡೈರೆಕ್ಟರ್ ವಸಂತ್ ಸಹಾಯ ಮಾಡಿದರು. "ಜಾವ ಕಾಫಿ" ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರವಾಗಿದೆ. ಬೆಂಗಳೂರು, ಮಂಗಳೂರು, ಕೇರಳ ಮುಂತಾದ ಕಡೆ ಚಿತ್ರೀಕರಣ ನಡೆದಿದೆ. ಚಿತ್ರದ ಮೊದಲ ಪ್ರತಿ ಸಿದ್ದವಾಗಿದೆ. ಸದ್ಯದಲ್ಲೇ ಸೆನ್ಸಾರ್ ಮಂಡಳಿ ಚಿತ್ರವನ್ನು ವೀಕ್ಷಿಸಲಿದೆ. ಆನಂತರ ಬಿಡುಗಡೆ ದಿನಾಂಕ ತಿಳಿಸುತ್ತೇವೆ. ಮೊದಲು ಕನ್ನಡದಲ್ಲಿ ಚಿತ್ರವನ್ನು ಬಿಡುಗಡೆ ಮಾಡುತ್ತೇವೆ. ಆನಂತರ ಪ್ಯಾನ್ ಇಂಡಿಯಾ ಚಿತ್ರವಾಗಿ ಎಲ್ಲಾ ಭಾ ಷೆಗಳಲ್ಲೂ ರಿಲೀಸ್ ಮಾಡುತ್ತೇವೆ ಎಂದರು. ಈಗಾಗಲೇ ತುಳು ಚಿತ್ರದಲ್ಲಿ ನಟಿಸಿರುವ ನನಗೆ ಇದು ಮೂರನೇ ಚಿತ್ರ. ಸಾನ್ವಿಕ ಅವರು ಒಂದೊಳ್ಳೆ ಚಿತ್ರ ಮಾಡಿದ್ದಾರೆ. ನಾನು ಪತ್ರಕರ್ತನ ಪಾತ್ರ ಮಾಡಿದ್ದೇನೆ ಎಂದು ನಾಯಕ ಶೈನಿಂಗ್ ಸ್ಟಾರ್ ಅಜಯ್ ವರ್ಧನ್ ತಿಳಿಸಿದರು. ಚಿತ್ರದಲ್ಲಿ ನಟಿಸಿರುವ ಮಂಜುನಾಥ್, ಪ್ರತಿಮ, ಭವಾನಿ ಶಂಕರ್, ವಿಜಯ್ ಕುಮಾರ್, ರಾಮಚಂದ್ರ, ರಾಮಲಿಂಗಪ್ಪ ಹಾಗೂ ಹಿನ್ನೆಲೆ ಸಂಗೀತ ನೀಡಿರುವ ಹದಿನೆಂಟು ವಯಸ್ಸಿನ ಯುವಕ ಧ್ರುವ ದೇವರಾಯನ್, ನೃತ್ಯ ನಿರ್ದೇಶಕ ಪಾಲಾಶ್ ಮಾಸ್ಟರ್ ಸೇರಿದಂತೆ ಚಿತ್ರತಂಡದ ಸದಸ್ಯರು "ಜಾವಕಾಫಿ" ಚಿತ್ರದ ಬಗ್ಗೆ ಮಾತನಾಡಿದರು. ಮೂರು ಹಾಡುಗಳಿರುವ ಈ ಚಿತ್ರಕ್ಕೆ ಶ್ರೀಧರ್ ಕರ್ಕೇರ ಸಂಗೀತ ನೀಡಿದ್ದಾರೆ.




## ಗೀತಾ ಪಿಕ್ಚರ್ಸ್ ಮತ್ತೊಂದು ಕೊಡುಗೆ 'ಪಬ್ಬಾರ್'

ಗೀತಾ ಶಿವರಾಜ್ ಕುಮಾರ್ ಒಡೆತನದ ಗೀತಾ ಪಿಕ್ಚರ್ಸ್ ಸದಾಭಿರುಚಿ ಸಿನಿಮಾಗಳ ನಿರ್ಮಾಣಕ್ಕೆ ಮುಂದಾಗಿದೆ. ಅದರ ಭಾಗವಾಗಿ ತಯಾರಾಗುತ್ತಿರುವ ಚಿತ್ರ ಪಬ್ಬಾರ್. ಗೀತಾ ಪಿಕ್ಚರ್ಸ್ ನಾಲ್ಕನೇ ಕೊಡುಗೆ ಪಬ್ಬಾರ್ ಸಿನಿಮಾದ ಮುಹೂರ್ತ ಇಂದು ಬೆಂಗಳೂರಿನ ವೀರಾಂಜನೇಯ ದೇಗುಲದಲ್ಲಿ ನೆರವೇರಿದೆ. ವಾಣಿಜ್ಯ ಚಲನಚಿತ್ರ ಮಂಡಳಿ ಮಾಜಿ ಅಧ್ಯಕ್ಷರಾದ ಚಂದ್ರಶೇಖರ್ ಕೆವಿ ಚಿತ್ರಕ್ಕೆ ಕ್ಲ್ಯಾಪ್ ಮಾಡಿದ್ದು , ನೆನಪಿರಲಿ ಪ್ರೇಮ್ ಕ್ಯಾಮೆರಾಗೆ ಚಾಲನೆ ಕೊಟ್ಟರು. ಧೀರೆನ್ ನಾಯಕನಾಗಿ ನಟಿಸುತ್ತಿರುವ ಪಬ್ಬಾರ್ ಚಿತ್ರಕ್ಕೆ ಶಾಖಾಹಾರಿ ಸಾರಥಿ ಸಂದೀಪ್ ಸುಂಕದ್ ಆಕ್ಷನ್ ಕಟ್ ಹೇಳುತ್ತಿದ್ದಾರೆ. ನಾಯಕಿಯಾಗಿ ಪ್ರೇಮ್ ಪುತ್ರಿ ಅಮೃತಾ ಪ್ರೇಮ್ ಅಭಿನಯಿಸುತ್ತಿದ್ದಾರೆ. ಮುಹೂರ್ತದ ಶಿವಣ್ಣ ಮಾತನಾಡಿ, ಒಂದೊಳ್ಳೆ ಪ್ರಯತ್ನ. ಒಳ್ಳೆ ಸಿನಿಮಾ ಬರಲಿ. ಈಗ ಎಲ್ಲರೂ ಹೇಳ್ತಾರೆ. ರಿಸ್ಕ್ ರಿಸ್ಕ್ ಎಂದು ರಿಸ್ಕ್ ಅಲ್ಲ ರಸ್ಕ್ ತೆಗೆದುಕೊಂಡು ತಿನ್ನಬೇಕು ಅಷ್ಟೇ. ಬೇರೆ ಭಾಷೆ ಜೊತೆ ಸ್ಪರ್ಧೆ ಮಾಡಬೇಕು ಎಂದರೆ ಹೊಸ ಸಿನಿಮಾ ಬರಬೇಕು. ಏನ್ ಆಗುತ್ತದೆ. ಏನ್ ಆಗೋಲ್ಲ ಎಂಬುವುದು ಆ ಮೇಲಿನ ಪ್ರಶ್ನೆ. ನಾವು ಪ್ರಯತ್ನವನ್ನೇ ಪಡದೇ ಇದ್ದರೆ ಹೇಗೆ ಅಗುತ್ತದೆ. ನಾವು ಇಂಡಸ್ಟ್ರೀಗೆ ಬಂದು ನಲ್ವತ್ತು ವರ್ಷ ಆಯ್ತು. ಇನ್ನೂ ಎಷ್ಟು ವರ್ಷ ಸಿನಿಮಾ ಮಾಡುತ್ತೇವೋ ಗೊತ್ತಿಲ್ಲ. ಹೊಸ ಪೀಳಿಗೆ ಬರಬೇಕು. ಹೊಸ ರೀತಿ ಸಿನಿಮಾ ಬರಬೇಕು. ಈ ರೀತಿ ವಿಭಿನ್ನ ಸಿನಿಮಾ ಮಾಡಬೇಕು ಎಂಬುದನ್ನು ನಾವೇ ಆಸೆಪಡುತ್ತೇವೆ. ಸಂದೀಪ್ ಬಂದು ಹೇಳಿದ ಕಥೆ ಇಷ್ಟವಾಗಿದೆ. ಪಬ್ಬಾರ್ ನಾನ್ ವೆಜ್ ಕಥೆ ಎನಿಸುತ್ತದೆ. ಇದು ಒಳ್ಳೆ ಸಿನಿಮ ಆಗುವ ಕಥೆಯಾಗುತ್ತದೆ ಎಂಬ ಭರವಸೆ ಇದೆ. ಅಮ್ಮನ ಹುಟ್ಟಿದಹಬ್ಬ ದಿನ ಚಿತ್ರ ಅನೌನ್ಸ್ ಮಾಡಿದ್ದೇವೆ. ಪ್ರೇಮ್ ಮಗಳು ಆಕ್ಟ್ ಮಾಡುತ್ತಿದ್ದಾರೆ. ಪ್ರೇಮ್ ನನಗೆ ಇಷ್ಟ. ಅವರ ಜೊತೆ ಒಳ್ಳೆ ಒಟನಾಟ ಇದೆ. ಲೋಕೇಷನ್ ಚೆನ್ನಾಗಿ ಇದೆ. ಕುತೂಹಲ ಕೊಡುತ್ತದೆ ಎಂದರು.



## 'ತಾಯವ್ವ'ನಾಗಿ ತೆರೆಗೆ ಬರಲು ಗೀತಪ್ರಿಯಾ ತಯಾರಿ

'ತಾಯವ್ವ' ಹೀಗೊಂದು ಹೆಸರಿನ ಚಿತ್ರ ಸುಮಾರು ಎರಡೂವರೆ ದಶಕಗಳ ಹಿಂದೆ ಕನ್ನಡದಲ್ಲಿ ತೆರೆಗೆ ಬಂದಿದ್ದು, ಹಲವರಿಗೆ ಗೊತ್ತಿರಬಹುದು. ಕನ್ನಡ ಚಿತ್ರರಂಗದ ನಟ 'ಕಿಚ್ಚ' ಸುದೀಪ್ ಮೊದಲ ಬಾರಿಗೆ ಮುಖ್ಯ ಭೂಮಿಕೆಯಲ್ಲಿ ಅಭಿನಯಿಸಿದ್ದ ಚಿತ್ರವದು. ಆಗ ತೆರೆಗೆ ಬಂದಿದ್ದ 'ತಾಯವ್ವ' ಚಿತ್ರದಲ್ಲಿ ಸುದೀಪ್ ಅವರೊಂದಿಗೆ ಹಿರಿಯ ನಟಿ ಉಮಾಶ್ರೀ 'ತಾಯವ್ವ'ನ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಈಗ ಅದೇ 'ತಾಯವ್ವ' ಎಂಬ ಹೆಸರಿನಲ್ಲಿ, ಮತ್ತೊಂದು ಚಿತ್ರ ತೆರೆಗೆ ಬರಲು ತಯಾರಾಗುತ್ತಿದೆ. ಇನ್ನು ಈ ಬಾರಿ 'ತಾಯವ್ವ'ನಾಗಿ ಈ ಚಿತ್ರದಲ್ಲಿ ನವ ಪ್ರತಿಭೆ ಗೀತಪ್ರಿಯ ಕಾಣಿಸಿಕೊಳ್ಳುತ್ತಿದ್ದಾರೆ. ಈಗಾಗಲೇ ಸದ್ದಿಲ್ಲದೆ 'ತಾಯವ್ವ' ಚಿತ್ರದ ಬಹುತೇಕ ಕೆಲಸಗಳು ಪೂರ್ಣಗೊಂಡಿದ್ದು, ಇತ್ತೀಚೆಗೆ 'ತಾಯವ್ವ' ಚಿತ್ರದ ಟ್ರೇಲರ್ ಬಿಡುಗಡೆಯಾಯಿತು. ಹಿರಿಯ ನಟ 'ಪ್ರಣಯರಾಜ' ಶ್ರೀನಾಥ್ 'ತಾಯವ್ವ' ಸಿನಿಮಾದ ಟ್ರೇಲರ್ ಬಿಡುಗಡೆಗೊಳಿಸಿದರು. ಈ ವೇಳೆ 'ಪದ್ಮಶ್ರೀ' ಪುರಸ್ಕೃತ ವೈದ್ಯೆ ಡಾ. ಕಾಮಿನಿ ರಾವ್, ಲ ಹರಿ ವೇಲು, ಲಕ್ಷ್ಮೀನಾರಾಯಣ, ಹಿರಿಯ ನಿರ್ಮಾಪಕ ಭಾ.ಮ.ಹರೀಶ್, ಪದ್ಮಾವತಿ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು. ಇದೇ ವೇಳೆ ಮಾತನಾಡಿದ ಹಿರಿಯ ನಟ ಶ್ರೀನಾಥ್, 'ಗೀತಪ್ರಿಯಾ ಎಂಬುದು ನನಗೆ ತುಂಬ ಇಷ್ಟವಾದ ಹೆಸರು. ಹಿರಿಯ ನಿರ್ದೇಶಕ ಗೀತಪ್ರಿಯಾ ಅವರನ್ನು ಈ ಹೆಸರು ನೆನಪಿಸುವಂತಿದೆ. 'ತಾಯವ್ವ' ಸಿನಿಮಾದಲ್ಲಿ ತಾಯವ್ವನಾಗಿ ಅಭಿನಯಿಸಿರುವವರು ಕೂಡ ಗೀತಪ್ರಿಯಾ. ಈ ಸಿನಿಮಾದ ಕಥೆ ಮತ್ತು ತುಣುಕುಗಳನ್ನು ನೋಡಿದಾಗ ಇದೊಂದು ಸಾಮಾಜಿಕ ಕಥಾಹಂದರದ ಸಿನಿಮಾ ಎಂಬುದು ಗೊತ್ತಾಗುತ್ತದೆ. ಸೂಲಗಿತ್ತಿಯ ಕಾರ್ಯ, ಹೆಣ್ಣಿನ ಮಹತ್ವ ಎರಡನ್ನೂ ಹೇಳುತ್ತದೆ. ಈ ಸಿನಿಮಾ ದಲ್ಲಿ ಒಂದು ಸಂದೇಶವಿದೆ. ಇಂಥ ಸಿನಿ ಮಾಗಳು ಹೆಚ್ಚಾಗಿ ಬರಬೇಕು. 'ತಾಯವ್ವ' ಎಂಬ ಹೆಸರಿನಲ್ಲೇ ಒಂದು ಭಾವನಾತ್ಮಕ ಸೆಳೆತವಿದೆ. ಈ ಸಿನಿಮಾದಲ್ಲೂ ಅದೇ ಅಂಶಗಳಿರಬಹುದು ಎಂಬ ನಿರೀಕ್ಷೆಯಿದೆ ಎಂದರು.



## 'ನಮೋ ವೆಂಕಟೇಶ' ಶೀಘ್ರದಲ್ಲೇ ತೆರೆಗೆ

ಹೀಗೊಂದು ಹೆಸರಿನ ಸಿನಿಮಾ ಸದ್ದಿಲ್ಲದೆ ತೆರೆಗೆ ಬರಲು ತಯಾರಾಗುತ್ತಿದೆ. ಬಹುತೇಕ ಹೊಸ ಪ್ರತಿಭೆಗಳೇ ಸೇರಿ ನಿರ್ಮಿಸುತ್ತಿರುವ 'ನಮೋ ವೆಂಕಟೇಶ' ಸಿನಿಮಾದ ಬಹುತೇಕ ಕೆಲಸಗಳು ಈಗಾಗಲೇ ಪೂರ್ಣಗೊಂಡಿದ್ದು, ಸದ್ಯ ಚಿತ್ರತಂಡ 'ನಮೋ ವೆಂಕಟೇಶ'ನ ಅಂತಿಮ ಹಂತದ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಲ್ಲಿ ನಿರತವಾಗಿದೆ. ಚಿತ್ರತಂಡದ ಪ್ಲಾನ್ ಪ್ರಕಾರ ಎಲ್ಲವೂ ನಡೆದರೆ, ಇನ್ನು ಎರಡು–ಮೂರು ತಿಂಗಳಲ್ಲಿ ತೆರೆಮೇಲೆ 'ನಮೋ ವೆಂಕಟೇಶ'ನ ದರ್ಶವನ್ನು ಕಣ್ತುಂಬಿಕೊಳ್ಳಬಹುದು ಎಂಬುದು ಚಿತ್ರತಂಡದ ಮೂಲಗಳ ಮಾಹಿತಿ. ಅಂದಹಾಗೆ, ಈ ಸಿನಿಮಾದ ಹೆಸರು 'ನಮೋ ವೆಂಕಟೇಶ' ಅಂತಿದ್ದರೂ, ಈ ಸಿನಿಮಾಕ್ಕೂ ಪುರಾಣ, ಪುಣ್ಯಕಥೆಗಳಲ್ಲಿ ಬರುವ 'ವೆಂಕಟೇಶ'ನಿಗೂ ಯಾವುದೇ ಸಂಬಂಧವಿಲ್ಲ! ಇದು ಇಂದಿನ ಕಾಲದ ಕಥೆಯನ್ನು ಹೊಂದಿರುವ ಔಟ್ ಆಂಡ್ ಔಟ್ ಕಮರ್ಷಿಯಲ್ ಎಂಟರ್‌ಟೈನ್ಮೆಂಟ್ ಸಿನಿಮಾ. ಕಥಾಹಂದರಕ್ಕೆ ಹೊಂದಾಣಿಕೆಯಾಗುತ್ತದೆ ಎಂಬ ಕಾರಣಕ್ಕೆ ಚಿತ್ರತಂಡ, ತಮ್ಮ ಚಿತ್ರಕ್ಕೆ 'ನಮೋ ವೆಂಕಟೇಶ' ಎಂದು ಹೆಸರಿಟ್ಟಿದೆ. ನವಿರಾದ ಹಾಸ್ಯದ ಜೊತೆಗೊಂದು ಪ್ರೇಮಕಥೆಯನ್ನು ಹೊತ್ತು ರೊಮ್ಯಾಂಟಿಕ್–ಕಾಮಿಡಿ ಶೈಲಿಯಲ್ಲಿ 'ನಮೋ ವೆಂಕಟೇಶ' ಸಿನಿಮಾ ತೆರೆಗೆ ಬರುತ್ತಿದೆ.



## 'ಪೀಟರ್'ಗಾಗಿ ಬಂದ ಬಾಲಿವುಡ್ ಗಾಯಕ ಅಜಯ್ ಗೋಗವಾಲೆ

ಪೀಟರ್ ಸಿನಿಮಾ ತನ್ನ ಕಂಟೆಂಟ್ ಮೂಲಕ ಸಿನಿಮಾಪ್ರೇಮಿಗಳಲ್ಲಿ ನಿರೀಕ್ಷೆ ಹೆಚ್ಚಿಸಿದೆ. ಚಿತ್ರದ ಹಾಡುಗಳ ಮೇಲೆ ನಿರೀಕ್ಷೆ ಕೂಡ ಹೆಚ್ಚಿಸುತ್ತಿದೆ. ಇತ್ತೀಚೆಗಷ್ಟೇ ಮಲಯಾಳಂ ಗಾಯಕ ಪ್ರಣವಂ ಸಸಿಯಿಂದ ಹಾಡು ಹಾಡಿಸಿದ್ದ ಚಿತ್ರತಂಡವೀಗ ಮತ್ತೊಂದು ಹಾಡಿಗೆ ಬಾಲಿವುಡ್ ಗಾಯಕರನ್ನು ಕರೆಸಿದೆ. ಪೀಟರ್‌ಗಾಗಿ ಬಾಲಿವುಡ್ ಖ್ಯಾತ ಗಾಯಕ ಹಾಗೂ ನಿರ್ದೇಶಕ ಅಜಯ್ ಗೋಗವಾಲೆ ಕನ್ನಡ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಹಿಂದಿಯ ಪ್ರಭಾಸ್ ನಟನೆಯ ಆದಿ ಪುರುಷ್, ಅಮೀರ್‌ಖಾನ್ ನಟನೆಯ ಪೀಕೆ, ಶಾರುಖ್ ನಟನೆಯ ಝೀರೋ ಮತ್ತು ಹಲವಾರು ದಿಗ್ಗಜರ ಚಿತ್ರಗಳಿಗೆ ಸಂಗೀತ ನಿರ್ದೇಶಿಸಿ ಹಾಡಿರುವ ಅಜಯ್ ಗೋಗವಲೆ ಈಗ ಕನ್ನಡದ ಪೀಟರ್ ಚಿತ್ರದ ಹಾಡಿಗೆ ಧ್ವನಿಯಾಗಿದ್ದಾರೆ. ಮಡಿಕೇರಿಯ ಸುತ್ತಲ ವಾತಾವರಣದಲ್ಲಿ ನಡೆಯುವ ಸಸ್ಪೆನ್ಸ್ ಡ್ರಾಮಾ ಪೀಟರ್. ಚಿತ್ರಕ್ಕೆ ಸುಕೇಶ್ ಶೆಟ್ಟಿ ಆಕ್ಷನ್ ಕಟ್ ಹೇಳಿದ್ದಾರೆ. ರಿತ್ವಿಕ್ ಮುರಳೀಧರ್ ಸಂಗೀತ ನಿರ್ದೇಶಕರಾಗಿ ಕೆಲಸ ಮಾಡಿದ್ದಾರೆ. ಪೀಟರ್ ಸಿನಿಮಾದಲ್ಲಿ ರಾಜೇಶ್ ಧ್ರುವ, ಜಾಹ್ನವಿ ರಾಯಲ, ರವೀಕ್ಷಾ ಶೆಟ್ಟಿ, ಪ್ರತಿಮಾ ನಾಯಕ್, ರಘು ಪಾಂಡೇಶ್ವರ್, ರಾಮ ನಾಡಗೌಡ, ವರುಣ್ ಪಟೇಲ್ ತಾರಾಬಳಗದಲ್ಲಿದ್ದಾರೆ.



## ಜೂನ್13ರಂದು ಬಿಡುಗಡೆ 'ಮಾತೊಂದ ಹೇಳುವೆ'

ಹಲವು ಹೊಸತುಗಳಿಗೆ ಹೆಸರಾಗಿರುವ ಸ್ಯಾಂಡಲ್ ವುಡ್ ಈಗ ಮತ್ತೊಂದು ಹೊಸತನಕ್ಕೆ ಸಾಕ್ಷಿಯಾಗಿದೆ. ಸಾಮಾಜಿಕ ಜಾಲತಾಣಗಳ ಮೂಲಕ ಮನೆಮಾತಾಗಿರುವ 'ಮಾತೊಂದ ಹೇಳುವೆ' ಚಿತ್ರವನ್ನು ಇದೇ ಮೊದಲ ಬಾರಿಗೆ ಕರ್ನಾಟಕ ಜನತೆ ಅರ್ಪಿಸುತ್ತಿದ್ದಾರೆ. ಹೊಸತನದ ಪ್ರೇಮಕಥೆಯೊಂದಿಗೆ ಕೌಟುಂಬಿಕ ಕಥಾಹಂದರ ಹೊಂದಿರುವ ಈ ಚಿತ್ರವನ್ನು ಆರ್‌ಜೆ ಆಗಿ ಹೆಸರು ಮಾಡಿರುವ ಮಯೂರ್ ಕಡಿ ನಿರ್ದೇಶಿಸಿದ್ದಾರೆ ಜೊತೆಗೆ ನಾಯಕನಾಗೂ ನಟಿಸಿದ್ದಾರೆ. ಈಗಾಗಲೇ ತೆರೆಗೆ ಬರಲು ಸಿದ್ದವಾಗಿರುವ ಈ ಚಿತ್ರದ ಬಿಡುಗಡೆ ದಿನಾಂಕವನ್ನು ಚಿತ್ರತಂಡ ವಿಶೇಷ ವಿಡಿಯೋ ತುಣುಕು ಬಿಡುಗಡೆ ಮಾಡುವ ಮೂಲಕ ಘೋಷಣೆ ಮಾಡಿದೆ. ಈ ವಿಡಿಯೋದಲ್ಲೇ ಚಿತ್ರದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಜೂನ್ 13ರಂದು ರಾಜ್ಯಾದ್ಯಂತ 'ಮಾತೊಂದ ಹೇಳುವೆ' ಚಿತ್ರ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಬಿಡುಗಡೆಯ ಹೊಸ್ತಿಲಲ್ಲಿರುವ ಈ ಚಿತ್ರದ ಪ್ರಚಾರ ಕಾರ್ಯಕ್ಕೆ ಚಿತ್ರತಂಡ ಚಾಲನೆ ನೀಡಿದೆ. ತಾರಾಗಣದಲ್ಲಿ ಮಯೂರ್ ಕಡಿ ಅವರ ಜೊತೆಯಲ್ಲಿ ಅಪೂರ್ವ ಆರಾಧ್ಯ, ಗಿರೀಶ್ ಶಿವಣ್ಣ, ಪಿ.ಡಿ ಸತೀಶ್ ಚಂದ್ರ, ಪ್ರತೀಕ್ ರಡ್ಡೆರ್, ಚೇತನ್ ಮರಂಬೀಡ್, ವಿದ್ಯಾಸಾಗರ ದೀಕ್ಷಿತ್, ಪ್ರತೀಕ್, ಕಾರ್ತಿಕ್ ಪತ್ತಾರ್, ಸುನಿಲ್ ಪತ್ರಿ, ಜ್ಯೋತಿ ಪುರಾಣಿಕ್ ಮುಂತಾದವರಿದ್ದಾರೆ. ಚಿತ್ರದ ಕಥೆಯಲ್ಲಿ ನಾಯಕ ಉತ್ತರ ಕರ್ನಾಟಕದ ರೇಡಿಯೋ ಜಾಕಿ ಆಗಿರುತ್ತಾನೆ.



## 'ಕಮ್ಮಂಗಿ ನನ್ ಮಗನೇ' ಹಾಡು ಹಾಡಿದ ನಟ ಶರಣ್

ಕನ್ನಡ ಚಿತ್ರರಂಗಕ್ಕೆ ಅನೇಕ ಸೂಪರ್ ಹಿಟ್ ಗೀತೆಗಳನ್ನು ನೀಡಿರುವ ನಿರ್ದೇಶಕ ಹಾಗೂ ಗೀತರಚನೆಕಾರ ಯೋಗರಾಜ್ ಭಟ್, ಪುರಾತನ ಫಿಲಂಸ್ ನಿರ್ಮಾಣದ, ಶ್ರೀಕಾಂತ್ ಹುಣಸೂರು ನಿರ್ದೇಶನದ ಹಾಗೂ ಪ್ರಣಂ ದೇವರಾಜ್ ನಾಯಕನಾಗಿ ನಟಿಸಿರುವ "S\O ಮುತ್ತಣ್ಣ" ಚಿತ್ರಕ್ಕಾಗಿ ಮತ್ತೊಂದು ಅದ್ಭುತ ಗೀತೆ ಬರೆದಿದ್ದಾರೆ. "ಕಮ್ಮಂಗಿ ನನ್ ಮಗನೇ" ಎಂಬ ಹಾಡನ್ನು ಯೋಗರಾಜ್ ಭಟ್ ಅವರು ಬರೆದಿದ್ದು, ತಮ್ಮ ವಿಶಿಷ್ಟ ಕಂಠದಿಂದ ಜನಪ್ರಿಯರಾಗಿರುವ ಸ್ಯಾಂಡಲ್‌ವುಡ್ ಅಧ್ಯಕ್ಷ ನಟ ಶರಣ್ ಹಾಗೂ ಸಂಗೀತ ನಿರ್ದೇಶಕ ನಾದಗಾರುಡಿಗ ವಿ.ಹರಿಕೃಷ್ಣ ಮ ಧುರವಾಗಿ ಹಾಡಿದ್ದಾರೆ. ಸಚಿನ್ ಬಸ್ರೂರ್ ಸಂಗೀತ ನೀಡಿದ್ದಾರೆ. ರಂಗಾಯಣ ರಘು ಹಾಗೂ ಪ್ರ ಣಂದೇವರಾಜ್ ಈ ಹಾಡಿನಲ್ಲಿ ಅಭಿನಯಿಸಿದ್ದಾರೆ. ಜನಪ್ರಿಯ ಗಾಯಕ ಸಂಚಿತ್ ಹೆಗ್ಡೆ ಕೂಡ 'S/o ಮುತ್ತಣ್ಣ' ಚಿತ್ರದ ಹಾಡು ಹಾಡಿದ್ದು, ಹೆಸರಾಂತ ಗಾಯಕಿ ದೀಪ್ತಿಸುರೇಶ್ ಇದೇ ಮೊದಲ ಬಾರಿಗೆ ಈ ಚಿತ್ರದ ಹಾಡೊಂದಕ್ಕೆ ಧ್ವನಿಯಾಗಿದ್ದಾರೆ. ಪ್ರಸ್ತುತ ನಟ ಶರಣ್ ಹಾಗೂ ಸಂಗೀತ ನಿರ್ದೇಶಕ ವಿ.ಹರಿಕೃಷ್ಣ ಅವರು ಸಹ "ಕಮ್ಮಂಗಿ ನನ್ ಮಗನೇ" ಹಾಡನ್ನು ಹಾಡಿದ್ದಾರೆ.



## ಸೋಮವಾರದಿಂದ ಸ್ಟಾರ್ ಸುವರ್ಣದಲ್ಲಿ 'ಸ್ನೇಹದ ಕಡಲಲ್ಲಿ' ಧಾರಾವಾಹಿ

ಕನ್ನಡಿಗರಿಗೆ ಮನೋರಂಜನೆಯ ರಸದೌತಣ ನೀಡುತ್ತಿರುವ ಮನೋರಂಜನಾ ವಾಹಿನಿ ಸ್ಟಾರ್‌ಸುವರ್ಣದಲ್ಲಿ ಇದೇ ಸೋಮವಾರದಿಂದ ಹೊಚ್ಚ ಹೊಸ ಧಾರಾವಾಹಿ "ಸ್ನೇಹದ ಕಡಲಲ್ಲಿ" ಆರಂಭವಾಗಲಿದೆ. ಮೇ12ರ ಸೋಮವಾರದಿಂದ ಪ್ರತಿದಿನ ರಾತ್ರಿ 8.30ಕ್ಕೆ ಈ ಧಾರಾವಾಹಿ ಪ್ರಸಾರವಾಗಲಿದೆ. ಈ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಧಾರಾವಾಹಿ ತಂಡದ ಸದಸ್ಯರು ಮಾತನಾಡಿದರು. ನಾನು 2003ರಲ್ಲಿ ನನ್ನ ಜರ್ನಿ ಶುರು ಮಾಡಿದ್ದು ಸ್ಟಾರ್ ಪ್ಲಸ್ ವಾಹಿನಿಯಲ್ಲಿ ಎಂದು ಮಾತನಾಡಿದ ನಿರ್ದೇಶಕ ಪ್ರೀತಂ ಶೆಟ್ಟಿ, ಈಗ ಸ್ಟಾರ್ ಸುವರ್ಣ ವಾಹಿನಿಗಾಗಿ "ಸ್ನೇಹದ ಕಡಲಲ್ಲಿ" ಎಂಬ ಧಾರಾವಾಹಿ ನಿರ್ದೇಶಿಸುತ್ತಿದ್ದೇನೆ. ಅವಕಾಶ ನೀಡಿದ ಸ್ಟಾರ್‌ಸುವರ್ಣ ವಾಹಿನಿಗೆ ಧನ್ಯವಾದ. ಈ ಧಾರಾವಾಹಿಯಲ್ಲಿ ದಕ್ಷಿಣ ಭಾರತದ ಜನಪ್ರಿಯ ನಟ ಸುಮನ್ ತಲ್ವಾರ್ ಅವರು ಅಭಿನಯಿಸುತ್ತಿದ್ದಾರೆ.



## ಅಮ್ಮಂದಿರ ದಿನದಂದು 'ಖೇಲಾ' 'ನನ್ ಅಮ್ಮ' ಹಾಡು

ಭರತ್ ಫಿಲಂಸ್ ಲಾಂಛನದಲ್ಲಿ ವಿ.ಜೆ.ಭರತ್ ಅವರು ನಿರ್ಮಿಸಿ, ನಿರ್ದೇಶಿಸುತ್ತಿರುವ ವಿಭಿನ್ನ ಕಥಾಹಂದರ ಹೊಂದಿರುವ "ಖೇಲಾ" ಚಿತ್ರದ "ನನ್ ಅಮ್ಮ" ಎಂಬ ಹಾಡು ಅಮ್ಮಂದಿರ ದಿನದಂದು (ಮದರ್ಸ್ ಡೇ) ಬಿಡುಗಡೆಯಾಗಿದೆ. ತಾಯಿ–ಮಗನ ಬಾಂಧವ್ಯದ ಕುರಿತಾದ ಈ ಹಾಡನ್ನು ಮನೋಜ್ ಸೌಗಂಧ್ ಮನ ಮುಟ್ಟುವಂತೆ ಬರೆದಿದ್ದಾರೆ. ಅನಿರುದ್ಧ್ ಶಾಸ್ತ್ರಿ ಅವರ ಗಾಯನದಲ್ಲಿ ಮೂಡಿಬಂದಿರುವ ಈ ಮಧುರವಾದ ಹಾಡಿಗೆ ಎಂ.ಎಸ್. ತ್ಯಾಗರಾಜ್ ಸಂಗೀತ ನೀಡಿದ್ದಾರೆ. ಭರತ್ ಫಿಲಂಸ್ ಯೂಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆಯಾಗಿರುವ ಈ ಹಾಡಿಗೆ ಮೆಚ್ಚುಗೆ ವ್ಯಕ್ತವಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಹಿರಿಯ ನಿರ್ಮಾಪಕ ಹಾಗು ನಿರ್ದೇಶಕ ವಿಷ್ಣುಕಾಂತ್ ಅವರ ಪುತ್ರ ಭರತ್ ವಿ.ಜೆ ಮೊದಲ ನಿರ್ಮಾಣ ಹಾಗೂ ನಿರ್ದೇಶನದ ಈ ಚಿತ್ರ ಪ್ರೇಮ ಕಥಾಹಂದರ ಹೊಂದಿದೆ. ಈವರೆಗೂ ಸಾಕಷ್ಟು ಲವ್ ಸ್ಟೋರಿಸ್ ಬಂದಿದೆಯಾದರೂ ಇದು ಸ್ವಲ್ಪ ವಿಭಿನ್ನ ಎನ್ನುತ್ತಾರೆ ಚಿತ್ರಕ್ಕೆ ಕಥೆ, ಚಿತ್ರಕಥೆಯನ್ನು ಬರೆದಿರುವ ನಿರ್ದೇಶಕ ಭರತ್. ಸ್ವಾಮಿ ಮೈಸೂರು ಛಾಯಾಗ್ರಹಣ ಹಾಗೂ ಅಮಿತ್ ಜವಳ್ಕರ್ ಸಂಕಲನವಿದೆ.





ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ನಿರ್ದೇಶಕರೊಬ್ಬರ ನಿರ್ಮಾಣದ "ಟಕಿಲಾ"



ಸಹಾಯಕ ನಿರ್ದೇಶಕರಾಗಿ, ಸಹ ನಿರ್ದೇಶಕರಾಗಿ, ಸ್ವತಂತ್ರ ನಿರ್ದೇಶಕರಾದ ಮರಡಿಹಳ್ಳಿ ನಾಗಚಂದ್ರ ಅವರು ಈಗ ಶ್ರೀ ಸಿದ್ಧಿವಿನಾಯಕ ಫಿಲಂಸ್ ಲಾಂಛನದಲ್ಲಿ 'ಟಕೀಲಾ' ಎಂಬ ಚಿತ್ರವನ್ನು ನಿರ್ಮಿಸಿದ್ದು ಮೇ 16ರಂದು ಕಲಾರಸಿಕರಿಗೆ ಕಿಕ್ ನೀಡಲು ರಾಜ್ಯಾದ್ಯಂತ ನೂರೈವತ್ತಕ್ಕೂ ಹೆಚ್ಚು ಚಿತ್ರಮಂದಿರಗಳಿಗೆ ಬರುತ್ತಿದೆ. ಪ್ರವೀಣ್ ನಾಯಕ್ ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ ಬರೆದು ಆಕ್ಷನ್ ಕಟ್ ಹೇಳಿರುವ ಈ ಚಿತ್ರದಲ್ಲಿ ಧರ್ಮ ಕೀರ್ತಿರಾಜ್, ನಿಖಿತಾ ಸ್ವಾಮಿ ನಾಯಕ, ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ, ಚಿತ್ರದ 2 ಹಾಡುಗಳಿಗೆ ಟಾಪ್ ಸ್ಟಾರ್ ರೇಣುಕುಮಾರ್ ಅವರು ಸಂಗೀತ ಸಂಯೋಜನೆ ಮಾಡಿದ್ದಾರೆ. ಮನುಷ್ಯ ಯಾವುದಾದರೂ ಒಂದು ಚಟಕ್ಕೆ ಅಂಟಿಕೊಂಡು ಅತಿಯಾದಾಗ ಅದರ ಪರಿಣಾಮ ಏನೆಲ್ಲ ಆಗಬಹುದು ಎಂಬುದನ್ನು ನಿರ್ದೇಶಕರು ಈ ಚಿತ್ರದ ಮೂಲಕ ಹೇಳಹೊರಟಿದ್ದಾರೆ.

## "ಲೈಟ್ ಹೌಸ್" ಮೇ 16ಕ್ಕೆ ತೆರೆಗೆ..



ಅಸ್ತ್ರ ಪ್ರೊಡಕ್ಷನ್ಸ್ ಹಾಗೂ ಅಮ್ಮೆ ಕ್ರಿಯೇಶನ್ಸ್ ಬ್ಯಾನರ್‌ನಲ್ಲಿ ಶ್ರೀ ದತ್ತಾತ್ರೇಯ ಪಾಟ್ಕರ್ ಬಂಟಕಲ್ಲು ಇವರ ನಿರ್ಮಾಣದಲ್ಲಿ ಸಂದೀಪ್ ಕಾಮತ್ ಅಜೆಕಾರು ಇವರ ನಿರ್ದೇಶನದಲ್ಲಿ ಮೂಡಿ ಬಂದಿರುವ "ಲೈಟ್ ಹೌಸ್" ಕನ್ನಡ ಚಲನಚಿತ್ರ ಇದೇ ಮೇ 16ರಂದು ತೆರೆಗೆ ಬರಲು ಸಜ್ಜಾಗಿದೆ. ಕರಾವಳಿ ಭಾಗದಕಲೆ, ಸಂಸ್ಕೃತಿ, ಆಚಾರ, ವಿಚಾರಗಳನ್ನು ಬಹಳ ಸುಂದರವಾಗಿ ಸಿನೆಮಾದಲ್ಲಿ ತೋರಿಸಲಾಗಿದ್ದು, ಚಿತ್ರದ ಬಹುತೇಕ ಎಲ್ಲಾ ಚಿತ್ರೀಕರಣವನ್ನು ಉಡುಪಿಯಲ್ಲಿ ನಡೆಸಲಾಗಿದೆ. ಎಂದು ಚಿತ್ರದ ನಿರ್ದೇಶಕರು ಮಾಹಿತಿ ನೀಡಿದ್ದಾರೆ. "ಲೈಟ್ ಹೌಸ್" ಸಂಪೂರ್ಣ ಸಾಂಸಾರಿಕ ಚಿತ್ರವಾಗಿದ್ದು, ಇಡೀ ಸಂಸಾರ ಮಕ್ಕಳ ಜೊತೆ ಕೂತು ನೋಡುವ ಸಿನೆಮಾ ಇದಾಗಿದೆ. ಪ್ರಸ್ತುತ ಕನ್ನಡ ಮಾಧ್ಯಮ ಶಾಲೆಗಳು ಎದುರಿಸುತ್ತಿರುವ ಸಮಸ್ಯೆಗಳು ಈ ಚಿತ್ರದಲ್ಲಿದೆ.

## ಮಲೆನಾಡ ಹೆಬ್ಬಾಗಿಲಿನಲ್ಲಿ "ಚೇಸರ್" ಪ್ರೇಮಗೀತೆ..

ಮಾಲತಿ ಶೇಖರ್ ಶಿವಮೊಗ್ಗ ನಿರ್ಮಾಣದ, ಜಯರಾಮ್ ನಿರ್ದೇಶನದ ಹಾಗೂ ಕನ್ನಡ ಹಾಗೂ ತೆಲುಗು ಚಿತ್ರರಂಗದಲ್ಲಿ ಜನಪ್ರಿಯರಾಗಿರುವ ಸುಮಂತ್ ಶೈಲೇಂದ್ರ ನಾಯಕನಾಗಿ ನಟಿಸಿರುವ "ಚೇಸರ್" ಚಿತ್ರಕ್ಕಾಗಿ ಖ್ಯಾತ ಗೀತರಚನೆಕಾರ ಕವಿರಾಜ್ ಅವರು ಬರೆದಿರುವ "ನೀನೇ ನೀನೇ ನನ್ನ ಆಸೆಯ ಬೆಳ್ಳಿಚುಕ್ಕಿ" ಎಂಬ ಸುಂದರ ಪ್ರೇಮಗೀತೆಯ ಲಿರಿಕಲ್ ವಿಡಿಯೋ ಬಿಡುಗಡೆ ಸಮಾರಂಭ ಮಲೆನಾಡ ಹೆಬ್ಬಾಗಿಲು ಶಿವಮೊಗ್ಗದ ಅಂಬೇಡ್ಕರ್ ಭವನದಲ್ಲಿ ಅದ್ದೂರಿಯಾಗಿ ನೆರವೇರಿತು. ಅರ್ಜುನ್ ಜನ್ಯ ಸಂಗೀತ ನೀಡಿರುವ ಈ ಹಾಡನ್ನು ಜಸ್ಕರಣ್ ಸಿಂಗ್ ಇಂಪಾಗಿ ಹಾಡಿದ್ದಾರೆ. ಸಂಸದ ಬಿ. ವೈ. ರಾಘವೇಂದ್ರ, ರಾಜಕೀಯ ಮುಖಂಡರಾದ ಶಾಸಕರಾದ ಚನ್ನಬಸಪ್ಪ, ಅಧ್ಯಕ್ಷರಾದ ಸುಂದರೇಶ್ ಎಸ್ ಹೆಚ್ ಹಾಗೂ ಖ್ಯಾತ ನಿರ್ಮಾಪಕ ಆರ್ ಚಂದ್ರು ಸೇರಿದಂತೆ ಅನೇಕ ಗಣ್ಯರು ಸೇರಿ ಈ ಹಾಡಿನ ಲಿರಿಕಲ್ ವಿಡಿಯೋ ಬಿಡುಗಡೆ ಮಾಡಿದ್ದಾರೆ.




## ಜು.18ಕ್ಕೆ ಪಂಚ ಭಾಷೆಯಲ್ಲಿ ಕಿರೀಟಿ ಎಂಟ್ರಿ..

ಜನಾರ್ದನ ರೆಡ್ಡಿ ಪುತ್ರ ಕಿರೀಟಿ ಚಿತ್ರರಂಗಕ್ಕೆ ಗ್ರ್ಯಾಂಡ್ ಎಂಟ್ರಿ ಕೊಟ್ಟಿದ್ದು ಗೊತ್ತೇ ಇದೆ. ಎಸ್ ಎಸ್ ರಾಜಮೌಳಿಯವರು ಕ್ಲ್ಯಾಪ್ ಮಾಡಿ ಕಿರೀಟಿ ಹೊಸ ಪಯಣಕ್ಕೆ ಶುಭ ಹಾರೈಸಿದ್ದರು. ಇದೀಗ ಈ ಚಿತ್ರ ಬಿಡುಗಡೆಗೆ ಸಜ್ಜಾಗಿದೆ. ಕಿರೀಟಿ ನಾಯಕನಾಗಿ ಚಿತ್ರರಂಗಕ್ಕೆ ಚೊಚ್ಚಲ ಹೆಜ್ಜೆ ಇಟ್ಟಿರುವ ಜೂನಿಯರ್ ಸಿನಿಮಾ ಜುಲೈ 18ಕ್ಕೆ ಬೆಳ್ಳಿಪರದೆ ಅಖಾಡಕ್ಕೆ ಇಳಿಯುತ್ತಿದೆ. ಕನ್ನಡ, ತೆಲುಗು, ತಮಿಳು, ಮಲಯಾಳಂ ಹಾಗೂ ಹಿಂದಿ ಭಾಷೆಯಲ್ಲಿ ಜೂನಿಯರ್ ಸಿನಿಮಾ ರಿಲೀಸ್ ಆಗಲಿದೆ. 'ಮಾಯಾಬಜಾರ್' ಸಿನಿಮಾ ಖ್ಯಾತಿಯ ರಾಧಾಕೃಷ್ಣ ರೆಡ್ಡಿ ನಿರ್ದೇಶನದಲ್ಲಿ ಜೂನಿಯರ್ ಸಿನಿಮಾ ತಯಾರಾಗಿದೆ. ದಕ್ಷಿಣ ಭಾರತದ ಖ್ಯಾತ ನಿರ್ಮಾಣ ಸಂಸ್ಥೆ ವಾರಾಹಿ ಫಿಲ್ಮಂ ಪ್ರೊಡಕ್ಷನ್ ಕಿರೀಟಿ ಮೊದಲ ಚಿತ್ರಕ್ಕೆ ಬಂಡವಾಳ ಹೂಡಿದ್ದು, ಬಿಗ್ ಬಜೆಟ್‌ನ ಈ ಸಿನಿಮಾದಲ್ಲಿ ಬಹುದೊಡ್ಡ ತಾರಾಗಣ ಇದೆ.










ಬೆಂಗಳೂರು : ಸಂತೋಷ್
ಮಾಗಡಿ ರಸ್ತೆ: VEERESH CINEMAS

ತಾವರೆಕೆರೆ : ಬಾಲಾಜಿ
ಉತ್ತರಹಳ್ಳಿ : ವೈಷ್ಣವಿವೈಭವಿ
PVR · INOX: MALL OF ASIA, NEXUS | ORION, VAISHNAVI | REGALIA, MARKET CITY | SPIRIT, UPTOWN | BHARATIYA, REX | GT | VR MALL, GLOBAL | FALCONCITY, SWAGATH | CENTRAL, LIDO | MANTRI | RMZ, GARUDA | YELAHANKA, NEIGHBOURHOOD, SBR | BROOKFIELD
cinépolis: ETA | MEENAKSHI, ORION EAST | LULU, SHANTINIKETAN | SJR
GOPALAN CINEMAS: ARCH | INNOVATION, GRAND | SIGNATURE, LEGACY
ROCKLINE mall & cinemas
MIRAJ SUNKADAKATTE
CINEPHILE HSR LAYOUT
INNOVATIVE MARATHALLI
KINO CINEMAS SEEGEHALLI
MOVIETIME RR NAGAR
new Fangled MG ROAD
ತುಮಕೂರು : ಗಾಯತ್ರಿ, PVR · INOX
ದೊಡ್ಡಬಳ್ಳಾಪುರ : ರಾಜ್‌ಕಮಲ್
ಮಧುಗಿರಿ : ಶಾಂತಲಾ
ಸಿರಾ : ಭಾಗ್ಯಲಕ್ಷ್ಮೀ
ಮೈಸೂರು : ಗಾಯತ್ರಿ, DRC, PVR · INOX GARUDA | FORUM, SATYAM | CENTRO, VISION CINEMAS
ಮಂಡ್ಯ : ಗುರುಶ್ರೀ

ಹಾಸನ : ಎಸ್.ಬಿ.ಜಿ
ಕೆ.ಆರ್.ನಗರ : ವೆಂಕಟೇಶ್ವರ
ಗುಂಡ್ಲುಪೇಟೆ : ವೆಂಕಟೇಶ್ವರ
ನಂಜನಗೂಡು : ಭಾರ್ಗವಿ
ಅರಸೀಕೆರೆ : ಸಾಧನಾ
ದಾವಣಗೆರೆ : ತ್ರಿಶೂಲ್, MOVIETIME
ಚಿತ್ರದುರ್ಗ : ಪ್ರಸನ್ನ
ಬಳ್ಳಾರಿ : MOVIETIME
ಹುಬ್ಬಳ್ಳಿ : ಸುಧಾ, cinépolis
ಧಾರವಾಡ : ಸಂಗಮ್, PVR · INOX
ಬೆಳಗಾವಿ : ಚಿತ್ರಾ, PVR · INOX, KAPEEL CINEMA, Bharath Cinemas
ಬಿಜಾಪುರ : ಲಕ್ಷ್ಮೀ
ಗದಗ : ಮಹಾಲಕ್ಷ್ಮೀ
ರಾಣೇಬೆನ್ನೂರು : ಶಿವಶಕ್ತಿ
ಬಾಗಲಕೋಟೆ : ವಾಸವಿ
ಇಳಕಲ್ : ಶ್ರೀನಿವಾಸ
ಸಿಂಧಗಿ : ಆನಂದ್
ಲಕ್ಷ್ಮೇಶ್ವರ : ರವಿ
ಹಾವೇರಿ : ಮಾಗವಿ

ಬಾದಾಮಿ : ಮಹಾಕೂಟೇಶ್ವರ
ಗಜೇಂದ್ರಗಢ : ಅಲಂಕಾರ್
ನಿಪ್ಪಾಣಿ : ಮ್ಯಾಗ್ನಮ್‌ಸಿನಿಮಾಸ್
ಕಲಬುರ್ಗಿ : ಶೆಟ್ಟಿಮಲ್ಟಿಪ್ಲೆಕ್ಸ್, PVR · INOX, MIRAJ
ಗಂಗಾವತಿ : ಶಿವೆ
ಕೊಪ್ಪಳ : ಲಕ್ಷ್ಮೀ
ರಾಯಚೂರು : MIRAJ
ಬೀದರ್ : ಸಪ್ನಮಹಲ್
ಶಿವಮೊಗ್ಗ : ಮಲ್ಲಿಕಾರ್ಜುನ, Bharath Cinemas
ಭದ್ರಾವತಿ : ಸತ್ಯ
ಬಾಳೆಹೊನ್ನೂರು : ಸುದರ್ಶಿನಿ
ಕುಂದಾಪುರ : Bharath Cinemas
ಪಡುಬಿದ್ರೆ : Bharath Cinemas
ಮಂಗಳೂರು : PVR · INOX, cinépolis, Bharath Cinemas BHARATH MALL, Cine GALAXY SURATHKAL
ಪುತ್ತೂರು : Bharath Cinemas
ದೇರಳಕಟ್ಟೆ : Bharath Cinemas
ಮಣಿಪಾಲ : PVR · INOX, cinépolis
ಹಾಗೂ ರಾಜ್ಯಾದ್ಯಂತ


Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212